**All India Radio: Bangalore**
**Regional Bulletin In Kannada**
**06.08.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**06.08.2025 / 6.40 p.m.**

**<><><><>**

**ಮುಖ್ಯಾಂಶಗಳು**

- **ಬೆಂಗಳೂರಿನ ವಿಕ್ಟೋರಿಯಾ, ವಾಣಿವಿಲಾಸ ಆಸ್ಪತ್ರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ- ಕಾರ್ಯವೈಖರಿ ಪರಿಶೀಲನೆ**
- **ಧರ್ಮಸ್ಥಳ ಪ್ರಕರಣ- ಅರಣ್ಯದೊಳಗೆ ಅಕ್ರಮವಾಗಿ ಶವ ಹೂತಿರುವುದು ಸಾಬೀತಾದರೆ ತಪ್ಪಿತ್ತಸ್ಥರ ವಿರುದ್ಧ ಕ್ರಮ - ಸಚಿವ ಈಶ್ವರ್ ಖಂಡ್ರೆ**
- **ಭ್ರಷ್ಟ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ - ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಎಚ್ಚರಿಕೆ**
- **ಬೆಂಗಳೂರಿನಲ್ಲಿ ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳ ಕಾಮಗಾರಿ ಚುರುಕುಗೊಳಿಸುವಂತೆ ಜಲಮಂಡಳಿ ಸೂಚನೆ**
- **ಬೆಂಗಳೂರಿನಲ್ಲಿ ವರಮಹಾಲಕ್ಷ್ಮೀ ಹಬ್ಬದ ಖರೀದಿ ಬಿರುಸು - ಹೂವು, ಹಣ್ಣುಗಳ ಬೆಲೆ ಏರಿಕೆ**

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬೆಂಗಳೂರಿನ ವಿಕ್ಟೋರಿಯಾ ಹಾಗೂ ವಾಣಿ ವಿಲಾಸ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವೈದ್ಯರು ರೋಗಿಗಳನ್ನು ಸಹಾನುಭೂತಿಯಿಂದ ಕಾಣಬೇಕು. ಯಾರ ಬಳಿಯೂ ಹಣ ಪಡೆಯಬಾರದೆಂದು ವೈದ್ಯರಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು. ವಾಣಿ ವಿಲಾಸ ಆಸ್ಪತ್ರೆ ಹಾಗೂ ಟ್ರಾಮಾ ಸೆಂಟರ್ ಗೂ ಭೇಟಿ ನೀಡಿದ್ದು, ಇಲ್ಲಿ ದಿನಕ್ಕೆ ೪೦ಕ್ಕೂ ಹೆಚ್ಚು ಹೆರಿಗೆಗಳು ಆಗುತ್ತಿವೆ. ಜನದಟ್ಟಣೆ ಹೆಚ್ಚಿರುವುದರಿಂದ ಆಸ್ಪತ್ರೆಯ ಹಾಸಿಗೆಗಳನ್ನು ಹೆಚ್ಚು ಮಾಡಬೇಕಿದೆ. ಜೊತೆಗೆ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲಾಗುವುದೆಂದು ಹೇಳಿದ್ದಾರೆ. ಇದೇ ವೇಳೆ ೧೨೦ ಹಾಸಿಗೆಗಳ ಆಸ್ಪತ್ರೆಯನ್ನು ೩೦೦ ಹಾಸಿಗೆಗಳಿಗೆ ಹೆಚ್ಚಿಸುವ ಬಗ್ಗೆ ಬೇಡಿಕೆ ಇದೆ. ಈ ಕುರಿತ ಪ್ರಸ್ತಾವನೆ ಸರ್ಕಾರದ ಮುಂದಿದ್ದು, ಇದನ್ನು ಪರಿಗಣಿಸಲಾಗುವುದೆಂದು ಸ್ಪಷ್ಟ ಪಡಿಸಿದ್ದಾರೆ.

<><><><>

ಧರ್ಮಸ್ಥಳ ಸುತ್ತಮುತ್ತಲಿನ ಮೀಸಲು ಅರಣ್ಯದೊಳಗೆ ಸಮಾಧಿ ಅಗೆಯುತ್ತಿರುವ ಎಸ್.ಐ.ಟಿ.ಗೆ ಕೆಲವೆಡೆ ಮಾನವರ ಅಸ್ಥಿ ಸಿಕ್ಕಿದೆ. ತನಿಖೆ ಬಳಿಕ ಅಕ್ರಮವಾಗಿ ಶವ ಹೂತಿರುವುದು ಸಾಬೀತಾದರೆ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಬೀದರ್ ನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅರಣ್ಯದಲ್ಲಿ ಅಕ್ರಮವಾಗಿ ಶವ ಹೂತಿರುವುದು

ದೃಢಪಟ್ಟರೆ, ಬೇಜವಾಬ್ದಾರಿತನ, ನಿರ್ಲಕ್ಷ್ಯ ತೋರಿದ ಅರಣ್ಯ ಅಧಿಕಾರಿ, ಸಿಬ್ಬಂದಿ ವಿರುದ್ಧವೂ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಬೆಳಗಾವಿ ಜಿಲ್ಲೆಯನ್ನು ಭ್ರಷ್ಟಾಚಾರ ಮುಕ್ತ ಮಾದರಿ ಜಿಲ್ಲೆಯಾಗಿಸುವ ನಿಟ್ಟಿನಲ್ಲಿ ಎಲ್ಲ ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಕರೆ ನೀಡಿದ್ದಾರೆ. ಬೆಳಗಾವಿಯಲ್ಲಿ ಇಂದು ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಲೋಕಾಯುಕ್ತ ಪ್ರಕರಣಗಳ ವಿಲೇವಾರಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಸರಕಾರ, ಜನಸಾಮಾನ್ಯರ ಶ್ರೇಯೋಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ರೂಪಿಸಿ ಅಗತ್ಯವಾದ ಅನುದಾನ ಒದಗಿಸುತ್ತಿದೆ. ಅನುದಾನದ ಸಮರ್ಪಕ ಬಳಕೆಯೊಂದಿಗೆ ಯೋಜನೆಗಳನ್ನು ಅರ್ಹರಿಗೆ ತಲುಪಿಸುವಲ್ಲಿ ಪ್ರಾಮಾಣಿಕ ಕರ್ತವ್ಯ ನಿರ್ವಹಿಸಬೇಕು ಎಂದು ಸೂಚಿಸಿದ್ದಾರೆ. ಒಂದು ವೇಳೆ ಅಧಿಕಾರಿಗಳು ಭ್ರಷ್ಟಾಚಾರದಲ್ಲಿ ತೊಡಗಿಕೊಂಡಿರುವುದು ಕಂಡು ಬಂದಲ್ಲಿ ಅಂತಹವರ ವಿರುದ್ಧ ಮುಲಾಜಿಲ್ಲದೆ ಶಿಸ್ತುಕ್ರಮ ವಹಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ಬೆಂಗಳೂರು ಜಲ ಮಂಡಳಿ ವತಿಯಿಂದ ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳ ಕಾಮಗಾರಿಗಳನ್ನು ಚುರುಕುಗೊಳಿಸುವಂತೆ ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ. ರಾಮ್ ಪ್ರಸಾತ್ ಮನೋಹರ್ ಸೂಚನೆ ನೀಡಿದ್ದಾರೆ. ಇಂದು ವಿ.ವಿ ಕಾಲುವೆ, ಮೈಲಸಂದ್ರ ಘಟಕಗಳಿಗೆ ಭೇಟಿ ನೀಡಿ ಕಾಮಗಾರಿಗಳ ಪರಿಶೀಲನೆ ನಡೆಸಿದ ಅವರು, ಮೈಲಸಂದ್ರ ಎಸ್ ಟಿ ಪಿ ಕಾಮಗಾರಿ ಮುಗಿಸದೆ ಇರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಡಿಸೆಂಬರ್ ತಿಂಗಳಾಂತ್ಯಕ್ಕೆ ಕಾಮಗಾರಿ ಪೂರ್ಣಗೊಳ್ಳಬೇಕು. ಇಲ್ಲದಿದ್ದಲ್ಲಿ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವ ಸೂಚನೆ ನೀಡಿದ್ದಾರೆ. ವೃಷಭಾವತಿ ಕಾಲುವೆ ಯೋಜನೆಯ ಕಾಮಗಾರಿ ೨೦೨೬ ಮಾರ್ಚ್ ತಿಂಗಳಿನಲ್ಲಿ ಪೂರ್ಣಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><><><>

ಕೊಪ್ಪಳದಲ್ಲಿ ಯುವಕನ ಹತ್ಯೆ ಪ್ರಕರಣವನ್ನು ಎನ್ಐಎ ತನಿಖೆಗೆ ನೀಡುವಂತೆ ಬಿಜೆಪಿ ಆಗ್ರಹಿಸಿದೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತಾನಾಡಿದ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿದಿದೆ ಎಂದು ಆರೋಪಿಸಿದ್ದಾರೆ. ಕರಾವಳಿಯ ಅಪಾಯಕಾರಿ ಪ್ರವೃತ್ತಿ ಈಗ ಉತ್ತರ ಕರ್ನಾಟಕಕ್ಕೂ ಹಬ್ಬಿದೆ ಎಂದು ದೂರಿದ್ದಾರೆ. ಕೊಪ್ಪಳದಲ್ಲಿ ಆಗಸ್ಟ್ ಎರಡು ಪರಿಶಿಷ್ಟ ಸಮುದಾಯದ ಗವಿಸಿದ್ದಪ್ಪ ನಾಯಕ್ ಎಂಬಾತನನ್ನು ಹತ್ಯೆ ಮಾಡಲಾಗಿತ್ತು.

<><><><>

ಶ್ರಾವಣಮಾಸದ ವರಮಹಾಲಕ್ಷ್ಮೀ ಹಬ್ಬಕ್ಕೆ ಬೆಂಗಳೂರಿನಲ್ಲಿ ಖರೀದಿ ಜೋರಾಗಿದೆ. ಕೆ.ಆರ್.ಮಾರುಕಟ್ಟೆಯಲ್ಲಿ ಹೂವು, ಹಣ್ಣುಗಳ ಬೆಲೆ ಇಂದಿನಿಂದಲೇ ಗಗನಕ್ಕೇರಿದೆ. ಮಲ್ಲಿಗೆ ಹೂವಿನ ಬೆಲೆ ಕೆಜಿಗೆ ೧ ಸಾವಿರದ ೬೦೦ ರೂಪಾಯಿ ಗಡಿ ದಾಟಿದೆ. ಕಾಕಡ ಮಲ್ಲಿಗೆ ಹೂವಿನ ಬೆಲೆ ೧ ಸಾವಿರ ರೂಪಾಯಿ, ಸೇವಂತಿಗೆ ಹೂವು ಕೆ.ಜಿ. ಗೆ ೪೦೦ ರಿಂದ ೫೦೦ ರೂಪಾಯಿ, ಗುಲಾಬಿ ಹೂವಿನ ಬೆಲೆ ೨೫೦ ರೂಪಾಯಿಯಿಂದ ೩೦೦ ರೂಪಾಯಿ ತಲುಪಿದೆ. ನಾಳೆ ಹೂವಿನ ಬೆಲೆ ಇನ್ನಷ್ಟು ಹೆಚ್ಚಳವಾಗುವ ಸಾಧ್ಯತೆ ಇದೆ. ಇದೇ ವೇಳೆ ಸೇಬು ೨೦೦ ರೂಪಾಯಿ ದಾಳಿಂಬೆ

ಹಣ್ಣಿನ ಬೆಲೆ ೧೫೦ ರೂಪಾಯಿ ತಲುಪಿದೆ. ತರಕಾರಿ ಬೆಲೆಯು ಗಗನಕ್ಕೇರಿದೆ. ಇದೆಲ್ಲದರ ನಡುವೆ ಹಬ್ಬದ ಖರೀದಿ ಜೋರಾಗಿದೆ.

<><><><>

ರಾಜ್ಯ ಸರಕಾರ ಹೆಚ್ಚು ಮುತುವರ್ಜಿ ವಹಿಸಿ ಕುರಿಗಾಹಿಗಳ ಸಮಸ್ಯೆಗೆ ಮುಕ್ತಿ ಸಿಗುವ ನಿಟ್ಟಿನಲ್ಲಿ ಕೆಲಸ ಮಾಡಲು ಬದ್ಧವಾಗಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಶಹಾಪುರ ನಗರದ ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ವಲಸೆ ಕುರಿಗಾರರಿಗೆ ಗುರುತಿನ ಚೀಟಿ ವಿತರಿಸಿ ಮಾತನಾಡಿದ ಅವರು, ಅನಾಹುತದಲ್ಲಿ ಕುರಿಗಳು ಸಾವನ್ನಪ್ಪಿದರೆ ಒಂದು ಕುರಿಗೆ ೭ ಸಾವಿರದ ೫೦೦ ರೂಪಾಯಿ ಪರಿಹಾರ ನೀಡುವ ಕಾರ್ಯಕ್ಕೆ ಮರುಚಾಲನೆ ನೀಡಲಾಗಿದೆ. ಡಿಸಿಸಿ ಬ್ಯಾಂಕ್, ಖಾದಿ ಬೋರ್ಡ್ ಒಪ್ಪಂದ ಮಾಡಿಕೊಂಡಿದ್ದು ೨ ಲಕ್ಷ ರೂಪಾಯಿವರೆಗೆ ಕುರಿ ಖರೀದಿ ಮಾಡಲು ಸಾಲ ನೀಡುವ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದ್ದಾರೆ..

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಉತ್ತಮ ಮಳೆ ಆಗುತ್ತಿದ್ದು ರೈತರು ಬಿತ್ತನೆ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಈ ಸಂದರ್ಭದಲ್ಲಿ ಕೃಷಿ ಚಟುವಟಿಕೆಗಳಿಗೆ ರಸಗೊಬ್ಬರಗಳ ಕೊರತೆ ಉಂಟಾಗದಂತೆ ಕ್ರಮವಹಿಸುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ಕೃಷಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ದೇವನಹಳ್ಳಿ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಯೂರಿಯಾ, ಡಿಎಪಿ ಗೊಬ್ಬರಕ್ಕೆ ಹೆಚ್ಚು ಬೇಡಿಕೆ ಇದೆ. ರಸಗೊಬ್ಬರ ದಾಸ್ತಾನು ಅಂಗಡಿ ಮಳಿಗೆಗಳಿಗೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><><><>

ವಿಜಯಪುರ ಜಿಲ್ಲೆಯಲ್ಲಿ ಮಳೆಯಿಂದ ಹಾನಿಯಾದ-ಹಾನಿಗೊಳಗಾಗುವ ಪ್ರದೇಶಗಳಿಗೆ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಪರಿಶೀಲನೆ ನಡೆಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಸೂಚನೆ ನೀಡಿದ್ದಾರೆ. ಶಿಥಿಲಾವಸ್ಥೆಯಲ್ಲಿರುವ ಅಂಗನವಾಡಿ ಹಾಗೂ ಶಾಲಾ ಕೊಠಡಿಗಳಿದ್ದಲ್ಲಿ ಕೂಡಲೇ ಸುರಕ್ಷಿತ ಕಟ್ಟಡಗಳಿಗೆ ಸ್ಥಳಾಂತರಿಸಲು ಕ್ರಮವಹಿಸುವಂತೆ ತಿಳಿಸಿದ್ದಾರೆ. ಮಕ್ಕಳ ರಕ್ಷಣೆ ಹಿತದೃಷ್ಟಿಯಿಂದ ಯಾವುದೇ ತೊಂದರೆಯಾಗದಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><><>

ಕೋಲಾರ ಜಿಲ್ಲಾ ಮಾರ್ಗದರ್ಶಿ, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಹಾಗೂ ಆರ್ಥಿಕ ಸಾಕ್ಷರತಾ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಬಂಗಾರಪೇಟೆ ತಾಲೂಕಿನ ಹುಲಿಬೆಲೆ ಗ್ರಾಮಪಂಚಾಯಿತಿಯಲ್ಲಿ ಕೇಂದ್ರ ಸರ್ಕಾರದ ಭದ್ರತಾ ಯೋಜನೆಗಳ ಜನಸುರಕ್ಷಾ ಅಭಿಯಾನ ಜರುಗಿತು. ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್‌ನ ಆರ್ಥಿಕ ಸಾಕ್ಷರತಾ ಸಲಹೆಗಾರ ನಾಗೇಂದ್ರಕುಮಾರ್ ಮಾತನಾಡಿ, ಗ್ರಾಹಕರು ಯಾವುದೇ ರೀತಿಯ ಆನ್ ಲೈನ್ ವಂಚನೆಗೆ ಒಳಗಾಗಬಾರದು. ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳು ಹೆಚ್ಚಾಗುತ್ತಿದ್ದು, ಹಣಕಾಸು ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

<><><><>

ಬ್ಯಾಂಕ್ ಶಾಖೆಗಳು ಹಾಗೂ ಎಟಿಎಂ ಕೇಂದ್ರಗಳ ಭದ್ರತೆಗೆ ಬ್ಯಾಂಕ್ ಸಿಬ್ಬಂದಿ ಸುರಕ್ಷತಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಬ್ಯಾಂಕ್

ಮ್ಯಾನೇಜರ್‌ಗಳಿಗೆ ಸೂಚಿಸಿದ್ದಾರೆ. ಬ್ಯಾಂಕ್, ಎಟಿಎಂ ಭದ್ರತೆ, ಸುರಕ್ಷತಾ ಕ್ರಮಗಳು ಹಾಗೂ ಜಾಗೃತಿ ಕುರಿತು ಜಿಲ್ಲೆಯ ವಿವಿಧ ಬ್ಯಾಂಕ್‌ಗಳ ವ್ಯವಸ್ಥಾಪಕರೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಸುರಕ್ಷತಾ ಉಪಕರಣಗಳ ಕಾರ್ಯಕ್ಷಮತೆಯನ್ನು ಪರಿಶೀಲಿಸಿ, ಅದರ ವರದಿಯನ್ನೂ ಸಲ್ಲಿಸಬೇಕು ಎಂದು ಹೇಳಿದ್ದಾರೆ.

<><><>

ಹಾಸನದ ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ಕೇಂದ್ರ ಸರ್ಕಾರದ ಅನುದಾನದ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಕ್ರಿಟಿಕಲ್ ಕೇರ್ ಸೆಂಟರ್ ಕಾಮಗಾರಿಗೆ ಶಾಸಕ ಸ್ವರೂಪ ಪ್ರಕಾಶ್ ಗುದ್ದಲಿ ಪೂಜೆ ನೆರವೇರಿಸಿದರು. ಸುಮಾರು ೧೩ ಕೋಟಿ ವೆಚ್ಚದಲ್ಲಿ ನಡೆಯುತ್ತಿರುವ ಕಾಮಗಾರಿಗೆ ಹಾಗೂ ಸುಮಾರು ೬ ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ವೈದ್ಯಕೀಯ ವಿದ್ಯಾರ್ಥಿಗಳ ವಸತಿ ನಿಲಯದ ಹೆಚ್ಚುವರಿ ಕಟ್ಟಡಕ್ಕೂ ಭೂಮಿ ಪೂಜೆ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ಹಾಸನ ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿಯೂ ಕ್ರಿಟಿಕಲ್ ಕೇರ್ ಸೆಂಟರ್ ಸ್ಥಾಪನೆಗೆ ಕೇಂದ್ರದಿಂದ ಅನುದಾನ ಬಂದಿದ್ದು ಕಾಮಗಾರಿ ನಡೆಯುತ್ತಿದೆ ಎಂದು ತಿಳಿಸಿದರು.

<><><>

ಬೆಂಗಳೂರಿನಲ್ಲಿ ನಡೆಯುತ್ತಿರುವ ಮಹಾರಾಣಿ ಟ್ರೋಫಿ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ಹುಬ್ಬಳ್ಳಿ ಟೈಗರ್ಸ್ ತಂಡ ೩೫ ರನ್‌ಗಳಿಂದ ಮಂಗಳೂರು ಡ್ರಾಗನ್ಸ್ ತಂಡವನ್ನು ಸೋಲಿಸಿದೆ. ಇನ್ನೊಂದು ಪಂದ್ಯದಲ್ಲಿ ಶಿವಮೊಗ್ಗ ಲಯನೆಸ್ ತಂಡವನ್ನು, ಮೈಸೂರು ವಾರಿಯರ್ಸ್ ತಂಡ ೨೬ ರನ್‌ಗಳಿಂದ ಪರಾಭವಗೊಳಿಸಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>